ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 24 ಇಎಸ್‌ಟಿ 4 (ಬಿ)(3) 2018. 1256.

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 14.05.2019

## ಸುತ್ತೋಲೆ

ವಿಷಯ: ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ ವೃಂದದ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 294 ಡಿಟಿಇ 2018 ದಿನಾಂಕ: 18.01.2019 ಹಾಗೂ ದಿನಾಂಕ: 23.04.2019.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಸರ್ಕಾರದ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ವೇತನಾನುದಾನಕ್ಕೊಳಪಟ್ಟು, ತದನಂತರದಲ್ಲಿ ನಿವೃತ್ತಿ/ರಾಜೀನಾಮೆ /ನಿಧನದಿಂದ ಉದ್ಭವಿಸುವ ಖಾಲಿ ಬೋಧಕ ಹುದ್ದೆಗಳನ್ನು ಮೀಸಲಾತಿ ಪದ್ಧತಿಯ ಅನುಸಾರ ಭರ್ತಿ ಮಾಡಬಹುದಾದ ಮತ್ತು ಕಾರ್ಯಭಾರವಿರುವ ಹುದ್ದೆಗಳನ್ನು ಗುರುತಿಸಿ, ಈಗಾಗಲೇ ಆರ್ಥಿಕ ಇಲಾಖೆಯು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸಹಮತಿಸಿರುವ ಹುದ್ದೆಗಳನ್ನು ಭರ್ತಿ ಮಾಡಿರುವ ಮಾಹಿತಿಯೊಂದಿಗೆ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನಿವೃತ್ತಿ/ರಾಜೀನಾಮೆ/ನಿಧನದಿಂದ ಖಾಲಿಯಾದ ಕಾರ್ಯಭಾರವಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

ಈ ಹಿನ್ನಲೆಯಲ್ಲಿ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಲಿ ಇರುವ ಶೈಕ್ಷಣಿಕ ಕಾರ್ಯಭಾರಕ್ಕನುಗುಣವಾಗಿ ಭರ್ತಿ ಮಾಡಬೇಕಾದ ಬೋಧಕ ವೃಂದದ ಹುದ್ದೆಗಳ ವಿವರಗಳನ್ನು ಮೀಸಲಾತಿಯನ್ವಯ ವರ್ಗೀಕರಿಸಿ, ಹುದ್ದೆ ತೆರವಾದ ದಿನಾಂಕ, ಕಾರಣ ಮತ್ತು ಇದಕ್ಕೆ ಸಂಬಂಧಿಸಿದ ಪೂರಕ ದಾಖಲೆಗಳೊಂದಿಗೆ ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲು ತಿಳಿಸಲಾಗಿದೆ. ಬೋಧಕ ವೃಂದದ ಖಾಲಿ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಂದ ಭರ್ತಿ ಮಾಡಬೇಕಾದ ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇದ್ದಲ್ಲಿ, ಇದಕ್ಕೆ ಸಂಬಂಧಿಸಿದಂತೆ, ಪ್ರತ್ಯೇಕ ಪ್ರಸ್ತಾವನೆಗಳನ್ನು ಕೂಡಲೇ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ:**
ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳು.

**ಪ್ರತಿ:** ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ (ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು).

Comp.3-E-EST4B-General-Circulars